1	2	3	4	5
24.	ಧರ್ಮಸ್ಥಳ ಶಾಖಾ ಗ್ರಂಥಾಲಯ	510	564	840
25.	ಬಿ.ಸಿ. ರೋಡ್ ಶಾಖಾ ಗ್ರಂಥಾಲಯ	549	551	845
26.	ವಿಟ್ಲ ಶಾಖಾ ಗ್ರಂಥಾಲಯ	445	579	720
27.	ಉಳ್ಳಾಳ ಶಾಖಾ ಗ್ರಂಥಾಲಯ	423	451	735
28.	ಮೂಡಬಿದರೆ ಶಾಖಾ ಗ್ರಂಥಾಲಯ	429	546	733
29.	ಮುಲ್ಕಿ ಶಾಖಾ ಗ್ರಂಥಾಲಯ	547	551	830
	ಒಟ್ಟು	**33920**	**35496**	**34049**

ಕಳೆದ ಮೂರು ವರ್ಷಗಳಲ್ಲಿ ದಕ್ಷಿಣಕನ್ನಡ ಜಿಲ್ಲೆಯಲ್ಲಿನ ಖರೀದಿಸಿ ಸರಬರಾಜು ಮಾಡಿದ ಪುಸ್ತಕಗಳ ಒಟ್ಟು ಸಂಖ್ಯೆ: 103465

ಮಂಗಳೂರಿನಲ್ಲಿರುವ ಕರ್ನಾಟಕ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಶಿಕ್ಷಕ-ಸಿಬ್ಬಂದಿಗಳ ಕೊರತೆ

2068(2440) ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಗಳೂರಿನಲ್ಲಿರುವ ಕರ್ನಾಟಕ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಕೊರತೆಯಿರುವ, ಶಿಕ್ಷಕರ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಯಾವಾಗ ಭರ್ತಿ ಮಾಡಲಾಗುವುದು;

ಆ) ಈ ಸಂಸ್ಥೆಗೆ ಕೊಟ್ಟಿರುವ ಅನುದಾನವೆಷ್ಟು ; ಬಿಡುಗಡೆ ಮಾಡಬೇಕಾಗಿರುವ ಅನುದಾನವೆಷ್ಟು;

ಇ) ಮಂಗಳೂರು ವಿಧಾನ ಸಭಾ ಕ್ಷೇತ್ರದಲ್ಲಿರುವ ವಿವಿಧ ಶಾಲೆಗಳಿಗೆ ಕೊರತೆಯಿರುವ ಶಿಕ್ಷಕರ ಹಾಗೂ ಸಿಬ್ಬಂದಿಗಳ ನೇಮಕ ಯಾವಾಗ ಮಾಡಲಾಗುವುದು;

ಈ) ಬ್ಯಾಕ್‌ಲಾಗ್ ನಿಯಮದಂತೆ ಮಂಗಳೂರಿನ ಎಷ್ಟು ಶಾಲೆಗಳಲ್ಲಿ ನೇಮಕ ಮಾಡಲಾಗಿದೆ;

ಉ) ಈ ಶಾಲೆಗಳಿಗೆ ಅವಶ್ಯಕವಿರುವ ಮೂಲಭೂತ ಸೌಲಭ್ಯ ಒದಗಿಸಲು ಕೈಗೊಂಡ ಕ್ರಮಗಳೇನು?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಮಂಗಳೂರಿನಲ್ಲಿರುವ ಕರ್ನಾಟಕ ಪಾಲಿಟೆಕ್ನಿಕ್‌ನಲ್ಲಿ ಒಟ್ಟು 62 ಬೋಧಕ ಹುದ್ದೆಗಳು ಮಂಜೂರಾಗಿದ್ದು ಅದರಲ್ಲಿ 37 ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದು 25 ಉಪನ್ಯಾಸಕರುಗಳ ಹುದ್ದೆಗಳು ಖಾಲಿ ಇರುತ್ತದೆ. ಹಾಗೂ ಒಟ್ಟು 109 ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು ಅದರಲ್ಲಿ 56 ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, 53 ಹುದ್ದೆಗಳು ಖಾಲಿ ಇರುತ್ತವೆ. ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪರಿಶೀಲನೆಯಲ್ಲಿದೆ.

ಆ) 2002-03ನೇ ಸಾಲಿಗೆ ಬಿಡುಗಡೆ ಮಾಡಿರುವ ಅನುದಾನ ರೂ. 8,07,000-00.

ಇ) ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆಯನ್ನು ನೇರ ನೇಮಕಾತಿಯ ಮೂಲಕ ಅಥವಾ ವರ್ಗಾವಣೆಯ ಮೂಲಕ ಹೊಸ ಶೈಕ್ಷಣಿಕ ವರ್ಷಾರಂಭಕ್ಕೆ ಮುನ್ನ ಸರಿಪಡಿಸಲಾಗುವುದು.

ಈ) ಬ್ಯಾಕ್‌ಲಾಗ್ ನಿಯಮದಂತೆ ಮಂಗಳೂರಿನ 52 ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ನೇಮಕಾತಿ ಮಾಡಲು ಆಯ್ಕೆ ಪ್ರಕ್ರಿಯೆಯು ಅಂತಿಮ ಹಂತದಲ್ಲಿದ್ದು ಶೀಘ್ರದಲ್ಲಿಯೇ ಭರ್ತಿ ಮಾಡಲಾಗುವುದು. ಹಾಗೆಯೇ 2 ಅನುದಾನಿತ ಪ್ರಾಥಮಿಕ ಶಾಲೆಗಳಿಗೆ ನೇಮಕಾತಿ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.

ಇಲ್ಲಿನ ಸರ್ಕಾರಿ ಪ್ರೌಢಶಾಲೆಗಳಲ್ಲಿ 3 ಬ್ಯಾಕ್‌ಲಾಗ್ ಹುದ್ದೆಗಳಿದ್ದು ಈ ಹುದ್ದೆಗಳನ್ನು ತುಂಬಲು ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ.

ಹಾಗೂ ಮಂಗಳೂರಿನ ಯಾವ ಶಾಲೆಗಳಲ್ಲಿಯೂ ಸಹ ಬ್ಯಾಕ್‌ಲಾಗ್ ಸಿಬ್ಬಂದಿ ವೃಂದದ ಹುದ್ದೆಗಳು ಖಾಲಿ ಇರುವುದಿಲ್ಲ.

ಉ) ಮಂಗಳೂರು ನಗರ ವಲಯ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳಿಗೆ ಮೂಲಭೂತ ಸೌಕರ್ಯಗಳಾದ ಕಟ್ಟಡ, ಕುಡಿಯುವ ನೀರು, ಕಟ್ಟಡ ದುರಸ್ತಿ, ಶೌಚಾಲಯ ನಿರ್ಮಾಣದ ಬಗ್ಗೆ ಇಲಾಖೆಯು ರಾಜ್ಯ ವಲಯ, ಜಿಲ್ಲಾ ವಲಯಗಳಿಂದ ಹಾಗೂ ಸರ್ವ ಶಿಕ್ಷಾ ಅಭಿಯಾನ ಸೌಲಭ್ಯದಡಿಯಲ್ಲಿ 5 ಶಾಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ 34 ಶಾಲೆಗಳ ಕಟ್ಟಡ ದುರಸ್ತಿ ಕಾರ್ಯ, 5 ಶಾಲೆಗಳಿಗೆ ಶೌಚಾಲಯ ನಿರ್ಮಾಣ ಕಾರ್ಯ ಮತ್ತು 3 ಶಾಲೆಗಳಿಗೆ ಹೊಸ ಕಟ್ಟಡಗಳ ನಿರ್ಮಾಣ ಕೆಲಸವನ್ನು ಪೂರೈಸಲಾಗಿದೆ.

(*** ಸನ್ಮಾನ್ಯ ಸಭಾಧ್ಯಕ್ಷರ ಆದೇಶದ ಮೇರೆಗೆ ಕಡತದಿಂದ ತೆಗೆದುಹಾಕಲಾಗಿದೆ)

(+ ಈ ಚಿನ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)